**ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ**

**ಸಿ ಸಿ ನಂ. 721/2024**

**ಚಾ.ಸಾ.** 4

**ಪ್ರಾ.ಸಾ.** 2

**ದಿನಾಂಕಃ19.04.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೊಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ಬಾಹುಬಲಿ |
| ತಂದೆಃ ಗಂಡನ ಹೆಸರು | ಜಯಪಾಲ |
| ಉದ್ಯೋಗ | ಗುತ್ತಿಗೆದಾರ |
| ವಯಸ್ಸು | 32 |
| ವಾಸಸ್ಥಳ | ಬಿ. ಗುಡಿಹಾಳ |

**ಪ್ರಾರಂಭ ಸಮಯಃ 04.55. ಪಿ ಎಂ.**

**ಮುಖ್ಯ ವಿಚಾರಣೆಃ ಎಪಿಪಿ ಯವರಿಂದ**

ಸಾಕ್ಷಿಗೆ ನಿಪಿ2, 3 ಮತ್ತು 6ನ್ನು ತೋರಿಸಲಾಗಿ ಅವುಗಳನ್ನು ನೋಡಿ ಗುರುತಿಸಿದ್ದು, ಅವುಗಳಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ2(ಬಿ), 3(ಬಿ) ಮತ್ತು 6(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ನಿಪಿ4, 5 ಮತ್ತು 7 ದಾಖಲೆಗಳನ್ನು ತೋರಿಸಲಾಗಿ ಅವುಗಳನ್ನು ನೋಡಿ ಗುರುತಿಸಿದರು.

ಸುಮಾರು 1 ವರ್ಷದ ಹಿಂದೆ ನಿಪಿ2ಕ್ಕೆ ಪೊಲೀಸ ಠಾಣೆಯಲ್ಲಿ ಖಾಲಿ ಹಾಳೆಯ ಮೇಲೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ನಕಾಶೆಯನ್ನು ತಯಾರು ಮಾಡಿಲ್ಲ. ನಿಪಿ4, 5 ಮತ್ತು 7ನ್ನು ಯಾವ ಉದ್ದೇಶಕ್ಕಾಗಿ ತೆಗೆದರು ಎಂದು ಗೊತ್ತಿಲ್ಲ.

**ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಮಾನ್ಯ ಸ.ಸ.ಅ ರವರಿಗೆ ಪಾಟೀಸವಾಲು ಮಾಡಲು ಅವಕಾಶ ನೀಡಲಾಯಿತು.**

ದಿಃ01.11.2023 ರಂದು ಬಿ. ಗುಡಿಹಾಳ-ಗಳಗಿ ಹುಲಕೊಪ್ಪ ರಸ್ತೆಯ ಮೇಲೆ ಪ್ರಾಸಾ1 ಜಮೀನಿನ ಹತ್ತಿರ ಸಂಜೆ 4.00 ಗಂಟೆ ಸಮಯದಲ್ಲಿ ಅಪಘಾತವಾಗಿರುತ್ತದೆ ಎಂದರೆ ಗೊತ್ತಿಲ್ಲ. ಪೋಲಿಸರು ದಿಃ 04.11.2023 ರಂದು ಚಾಸಾ 5 ಮತ್ತು ನನ್ನ ಸಮಕ್ಷಮ ಪ್ರಾಸಾ1 ರವರು ತೋರಿಸಿದ ಸ್ಥಳದಲ್ಲಿ ನಿಪಿ2 ರಂತೆ ಪಂಚನಾಮೆ ಜರುಗಿಸಿ ನಿಪಿ3 ರಂತೆ ನಕಾಶೆಯನ್ನು ತಯಾರು ಮಾಡಿ ನಿಪಿ4 ಮತ್ತು 5 ರಂತೆ ಭಾವಚಿತ್ರಗಳನ್ನು ತೆಗೆದರು ಎಂದರೆ ಸರಿಯಲ್ಲ. ನಂತರ ಅದೇ ದಿನ ಮಧ್ಯಾಹ್ನ 1.00 ಗಂಟೆಯ ಸಮಯದಲ್ಲಿ ಪೋಲಿಸ ಠಾಣೆಯ ಆವರಣದಲ್ಲಿ ಚಾಸಾ 5 ಮತ್ತು ನನ್ನ ಸಮಕ್ಷಮ ನಿಪಿ6 ರಂತೆ ವಾಹನ ತಡೆ ಪಂಚನಾಮೆ ಜರುಗಿಸಿ ನಿಪಿ7 ಮತ್ತು 8 ರಂತೆ ಭಾವಚಿತ್ರಗಳನ್ನು ತೆಗೆದರು ಎಂದರೆ ಸರಿಯಲ್ಲ. ನಿಪಿ2, 3 ಮತ್ತು 6 ರಲ್ಲಿರುವ ಸಂಗತಿಗಳನ್ನು ನನಗೆ ಓದಿ ಹೇಳಿ ನನ್ನ ಸಹಿಗಳನ್ನು ಪಡೆದುಕೊಂಡರು ಎಂದರೆ ಸರಿಯಲ್ಲ. ಆಪಾದಿತನು ನನ್ನ ಸ್ನೇಹಿತನಾಗಿರುವುದರಿಂದ ಅವನಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆಪಾದಿತನ ಪರ ಶ್ರೀ. ಎಮ್ ಬಿ ಡಿ ವಕೀಲರು ಪಾಟೀಸವಾಲು ಇಲ್ಲ ಎಂದು ನುಡಿದರು.**

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

**ಓ ಹೇ ಕೆ ಸರಿ ಇದೆ,**

**ದಿವಾಣಿ ನ್ಯಾಯಾಧೀಶರು ಹಾಗೂ**

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ.**